147

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯದ ವ್ಯಾಪ್ತಿಯಲ್ಲಿ ಕೈಗೊಳ್ಳುವ Improvements of roads and drains at attur village, attur Layout, Santhosh nagar, muneshwara nagara, ward no.3 ರ ಕಾಮಗಾರಿಗೆ ಆಡಳಿತಾತ್ಮಕ ಹಾಗೂ ಟೆಂಡರ್‌ಗಳಿಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 449 ಎಸ್‌ಎಫ್‌ಸಿ 2015, ದಿನಾಂಕ: 24-11-2015.
2. ಸರ್ಕಾರದ ಆದೇಶ ಸಂಖ್ಯೆ: ನಅಇ 315 ಎಸ್‌ಎಫ್‌ಸಿ 2015, ದಿನಾಂಕ: 01-09-2016
3. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರ ಪತ್ರ ಸಂಖ್ಯೆ: ಆ/ಪಿಆರ್/559/2017-18, ದಿನಾಂಕ: 08-05-2017.
4. ದಿನಾಂಕ: 29-05-2017 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ: 24-11-2015ರ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2015-16ನೇ ಸಾಲಿನಲ್ಲಿ ಘೋಷಿಸಿರುವ ರೂ.1000.00 ಕೋಟಿ ವಿಶೇಷ ಅನುದಾನದಡಿ ಕೈಗೊಳ್ಳುವ ರೂ.797.26 ಕೋಟಿಗಳ ಅಂದಾಜು ವೆಚ್ಚಕ್ಕೆ ಒಟ್ಟು 1156 ಕಾಮಗಾರಿಗಳ ಕ್ರಿಯಾ ಯೋಜನೆಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ ಅನುಮೋದನೆ ನೀಡಲಾಗಿದೆ. ಸದರಿ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯದ ವ್ಯಾಪ್ತಿಯಲ್ಲಿ ಕೈಗೊಳ್ಳುವ "Construction of link road from Yelahanka new town shiva mandira road to Attur lake in ward no 03 Yelahanka satellite town sub division"ರ ಕಾಮಗಾರಿಗೆ ರೂ.200.00 ಲಕ್ಷಗಳನ್ನು ನಿಗಧಿ ಪಡಿಸಲಾಗಿತ್ತು.

2. ಮೇಲೆ (2) ರಲ್ಲಿ ಓದಲಾದ ದಿನಾಂಕ: 01-09-2016ರ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರ ಪ್ರಸ್ತಾವನೆಯನ್ವಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯದ ವ್ಯಾಪ್ತಿಯಲ್ಲಿ ಕೈಗೊಳ್ಳುವ "Construction of link road from Yelahanka new town shiva mandira road to Attur lake in ward no 03 Yelahanka satellite town sub division"ರ ಕಾಮಗಾರಿಯ ಬದಲಿಗೆ ಅದೇ ಮೊತ್ತದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯದ ವ್ಯಾಪ್ತಿಯಲ್ಲಿ ಕೈಗೊಳ್ಳುವ Improvements to roads and drains at Attur village Attur layout Santhosh Nagara Muneshwara Nagara in ward no-03ರ ಬದಲಿ ಕಾಮಗಾರಿಗೆ ಅನುಮೋದನೆ ನೀಡಲಾಗಿರುತ್ತದೆ.

3. ಮೇಲೆ (3) ರಲ್ಲಿ ಓದಲಾದ ದಿನಾಂಕ: 08-05-2017ರ ಪತ್ರದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಸರ್ಕಾರದ ಆದೇಶ ಸಂಖ್ಯೆ: ನಅಇ 315 ಎಸ್‌ಎಫ್‌ಸಿ 2015, ದಿನಾಂಕ: 01-09-2016 ರಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯದ ವ್ಯಾಪ್ತಿಯಲ್ಲಿ ಕೈಗೊಳ್ಳುವ Improvements to roads and drains at Attur village Attur layout Santhosh Nagara Muneshwara Nagara in ward no-03ರ ರೂ.200.00 ಲಕ್ಷಗಳ ಬದಲಿ ಕಾಮಗಾರಿಗೆ ಅನುಮೋದನೆ ನೀಡಲಾಗಿರುತ್ತದೆ. ಈ ಕಾಮಗಾರಿಗೆ ದಿನಾಂಕ: 26-12-2017 ರಂದು ದ್ವಿಲಕೋಟೆ ಇ-ಪ್ರಕ್ಯೂರ್‌ಮೆಂಟ್ ಪದ್ಧತಿಯಲ್ಲಿ ಟೆಂಡರ್ ಆಹ್ವಾನಿಸಲಾಗಿದೆ ಸದರಿ ಟೆಂಡರ್‌ನಲ್ಲಿ 4 ಜನ ಗುತ್ತಿಗೆದಾರರು ಭಾಗವಹಿಸಿದ್ದು, ಇವರ ತಾಂತ್ರಿಕ ಮೌಲ್ಯ ಮಾಪನವನ್ನು ಮುಖ್ಯ ಅಭಿಯಂತರರು (ಯಲಹಂಕ) ರವರ ಅಧ್ಯಕ್ಷತೆಯಲ್ಲಿ ಟೆಂಡರ್ ಮೌಲ್ಯಮಾಪನ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಅಂತಿಮವಾಗಿ ಗುತ್ತಿಗೆದಾರರಾದ ಶ್ರೀ ಬಿ.ಬಿ. ಉಮೇಶ ಮತ್ತು ಶ್ರೀ ಎಂ.ಎಸ್ ವೆಂಕಟೇಶ್ ಅರ್ಹತೆಯನ್ನು ಹೊಂದಿರುತ್ತಾರೆ ಎಂದು ದೃಢೀಕರಿಸಿ ಇಬ್ಬರು ಗುತ್ತಿಗೆದಾರರ ಆರ್ಥಿಕ ವಿವರಗಳನ್ನು ತೆರೆದು ಪಟ್ಟಿ ಮಾಡಿದ್ದು, ವಿವರಗಳು ಈ ಕೆಳಕಂಡಂತೆ ಇರುತ್ತವೆ.

ಕ್ರ ಸಂ.	ತಾಂತ್ರಿಕ ಮೌಲ್ಯ ಮಾಪನದಲ್ಲಿ ಅರ್ಹರಾದ ಗುತ್ತಿಗೆದಾರರು	ಟೆಂಡರ್‌ಗಿಟ್ಟ ಮೊತ್ತ (ರೂ. ಗಳಲ್ಲಿ)	ಟೆಂಡರ್‌ನಲ್ಲಿ ನಮೂದಿಸಿರುವ ಮೊತ್ತ (ರೂ. ಲಕ್ಷಗಳಲ್ಲಿ)	2016-17ನೇ ಸಾಲಿನ ದರಗಳಿಗೆ ಹೋಲಿಸಿದಾಗ
1.	ಶ್ರೀ ಬಿ.ಬಿ. ಉಮೇಶ	19476590.72/-	18484154.60/-	5.10% ರಷ್ಟು ಕಡಿಮೆ
2.	ಶ್ರೀ ಎಂ.ಎಸ್ ವೆಂಕಟೇಶ್		19203871.21/-	1.40% ರಷ್ಟು ಕಡಿಮೆ

ಟೆಂಡರ್‌ನಲ್ಲಿ ಕನಿಷ್ಠ ದರ ನಮೂದಿಸಿರುವ ಎಲ್-1 ಗುತ್ತಿಗೆದಾರರಾದ ಶ್ರೀ ಬಿ.ಬಿ. ಉಮೇಶ ರವರು ನಮೂದಿಸಿರುವ ಮೊತ್ತವಾದ ರೂ.18484154.60 /- ಗಳು ಟೆಂಡರ್‌ಗಿಟ್ಟ ಮೊತ್ತಕ್ಕೆ (2015-16ನೇ ದರ ಪಟ್ಟಿಗೆ) ಹೋಲಿಸಿದಾಗ ಶೇಕಡಾ 5.10 ರಷ್ಟು ಕಡಿಮೆ ಇದ್ದು, ಕಾಮಗಾರಿಯ ಅಂದಾಜು ಮೊತ್ತ ರೂ.200.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ಟೆಂಡರ್‌ಗೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

4. ಮೇಲೆ (3) ರಲ್ಲಿ ಓದಲಾದ ದಿನಾಂಕ: 29-05-2017 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ ವಿಷಯವನ್ನು ಚರ್ಚಿಸಿ ನಿರ್ಣಯಿಸಿದಂತೆ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ: ನಅಇ 329 ಎಂಎನ್‌ವೈ 2017,
ಬೆಂಗಳೂರು, ದಿನಾಂಕ: 04-07-2017.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಯಲಹಂಕ ವಲಯದ ವ್ಯಾಪ್ತಿಯಲ್ಲಿ ಕೈಗೊಳ್ಳುವ Improvements to roads and drains at Attur village Attur layout Santhosh Nagara Muneshwara Nagara in ward no-03ರ ಬದಲಿ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 315 ಎಸ್‌ಎಫ್‌ಸಿ 2016, ದಿನಾಂಕ: 01-09-2016 ರಲ್ಲಿ ಅನುಮೋದನೆ ನೀಡಿರುವ ಸದರಿ ಕಾಮಗಾರಿಯ ಅಂದಾಜುಮೊತ್ತ ರೂ.2.00 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅಧಿಕಾರಯುಕ್ತ ಸಮಿತಿಯು ಶಿಫಾರಸ್ಸಿನಂತೆ ಎಲ್-1 ಗುತ್ತಿಗೆದಾರರಾದ ಶ್ರೀ ಬಿ.ಬಿ. ಉಮೇಶ ರವರು ನಮೂದಿಸಿರುವ ಮೊತ್ತ ರೂ.1.848415 ಕೋಟಿಗಳಿಗೆ (ಒಂದು ಕೋಟಿ ಎಂಬತ್ತುನಾಲ್ಕು ಲಕ್ಷದ ಎಂಟು ಸಾವಿರದ ನಾಲ್ಕುನೂರ ಹದಿನೈದು ರೂಪಾಯಿಗಳು) 2016-17ನೇ ಸಾಲಿನ ದರಗಳಿಗೆ ಹೋಲಿಸಿದಾಗ ಶೇಕಡಾ 5.10% ರಷ್ಟು ಕಡಿಮೆ ಮೊತ್ತಕ್ಕೆ

ಮಿತಿಗೊಳಿಸಿ ಅನುಮೋದಿಸಲು ಶಿಫಾರಸ್ಸು ಮಾಡಿದ್ದು, ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಟೆಂಡರ್‌ಗೆ ಸರ್ಕಾರದ ಅನುಮೋದನೆ ನೀಡಿದೆ.

1. ಮೇಲಿನ ಕಾಮಗಾರಿಯನ್ನು ಕೆ.ಟಿ.ಪಿ.ಪಿ. ಕಾಯ್ದೆ/ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.

2. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾಗ-1), ದಿನಾಂಕ: 21-06-2016 ರಲ್ಲಿ ಮುಂದುವರೆದ ಕಾಮಗಾರಿಗಾಗಿ 2016-17ನೇ ಸಾಲಿನಲ್ಲಿ ಮೀಸಲಿಟ್ಟ ನಗರೋತ್ಥಾನ ಯೋಜನೆಯ ಅನುದಾನದಿಂದ ಭರಿಸುವುದು.

3. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

4. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಹಾಗೂ ಬದಲಿ ಕಾಮಗಾರಿಗಳು ಇದ್ದಲ್ಲಿ ಸದರಿ ಬದಲಿ ಕಾಮಗಾರಿಗಳಿಗೆ ಸರ್ಕಾರದಿಂದ ಅನುಮೋದನೆ ಪಡೆಯಲಾಗಿದೆಯೇ ಎಂದು ಖಾತರಿ ಪಡಿಸಿಕೊಳ್ಳತಕ್ಕದ್ದು.

5. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮವಹಿಸತಕ್ಕದ್ದು.

6. ಚಾಲ್ತಿ ನಿಯಮಗಳನ್ವಯ ಮೇಲಿನ ಕಾಮಗಾರಿಯ ಒಟ್ಟಾರೆ ಪರಿಷ್ಕೃತ ಅಂದಾಜು ಪಟ್ಟಿಯನ್ನು ಕಾಮಗಾರಿಯ ಅಂತಿಮ ಬಿಲ್ಲನ್ನು ಪಾವತಿಸುವುದಕ್ಕಿಂತ ಮೊದಲು ಹಾಗೂ ಕಾಮಗಾರಿಯನ್ನು ಪೂರ್ಣಗೊಳಿಸುವುದಕ್ಕಿಂತ ಮೊದಲು ಸರ್ಕಾರದ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.

7. ದಿನಾಂಕ: 29-05-2017ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ವಿಕೇತ್ ಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:
1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
5. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ 3 ಮತ್ತು 9) ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
11. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
12. ಅಧೀಕ್ಷಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
13. ಶಾಪಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಹೊರಡಿಸಿದೆ
ದಿನಾಂಕ : 7/7/2017